## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಶರಣಬಸವ, ಕಾರ್ಯನಿರ್ವಾಹಕ ಅಧಿಕಾರಿ, ತಾ.ಪಂ. ಸಿಂಧನೂರು, ರಾಯಚೂರು ಜಿಲ್ಲೆ ಇವರ ದುರ್ನಡತೆ ಕುರಿತಂತೆ ಇಲಾಖಾ ವಿಚಾರಣೆಯನ್ನು ಜರುಗಿಸಲು ಕರ್ನಾಟಕ ಉಪ ಲೋಕಾಯುಕ್ತ-1 ರವರಿಗೆ ವಹಿಸುವ ಬಗ್ಗೆ.

ಓದಲಾಗಿದೆ: ಅಪರ ನಿಬಂಧಕರು, ವಿಚಾರಣೆಗಳು-6, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರ ಅ.ಸ.ಪತ್ರ ಸಂಖ್ಯೆ: ಕಂಪ್ಲೇಂಟ್: ಉಪಲೋಕ್: ಜಿಎಲ್‌ಬಿ : 340:2011: ಎಆರ್‌ಇ-6 ದಿನಾಂಕ: 25-10-2012.

---

ಪ್ರಸ್ತಾವನೆ:

ಶ್ರೀ ಭೀಮಣ್ಣ ತಂದೆ ಚಿದಾನಂದಪ್ಪ, ಸಾ: ಮಾಟೂರು, ಸಿಂಧನೂರು ತಾಲ್ಲೂಕು, ರಾಯಚೂರು ಜಿಲ್ಲೆ ಇವರು ಬಪ್ಪೂರು ಗ್ರಾಮ ಪಂಚಾಯತಿಯ ವ್ಯಾಪ್ತಿಯ ಮಾಟೂರು ಗ್ರಾಮದಲ್ಲಿ ಕುಡಿಯುವ ನೀರಿನ ಕೆರೆ ನಿರ್ಮಾಣ ಕಾಮಗಾರಿಯ ಅವ್ಯವಹಾರದಲ್ಲಿ ಭಾಗಿಯಾಗಿರುವ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ,ಸಿಂಧನೂರು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬಪ್ಪೂರು ಗ್ರಾಮ ಪಂಚಾಯತಿ, ಸಿಂಧನೂರು ತಾಲ್ಲೂಕು ಇವರುಗಳ ವಿರುದ್ಧ ಕರ್ನಾಟಕ ಲೋಕಾಯುಕ್ತ ಸಂಸ್ಥೆಯಲ್ಲಿ ದೂರನ್ನು ಸಲ್ಲಿಸಿರುತ್ತಾರೆ. ಸದರಿ ದೂರಿನ ಬಗ್ಗೆ ತನಿಖೆಯನ್ನು ಕೈಗೊಂಡು ವಿವರವಾದ ವರದಿಯನ್ನು ಸಲ್ಲಿಸಲು ಲೋಕಾಯುಕ್ತ ಕಛೇರಿಯು ದಿನಾಂಕ: 30-01-2012ರ ಪತ್ರದಲ್ಲಿ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಸಿಂಧನೂರು ಇವರಿಗೆ ಸೂಚಿಸಿತ್ತು. ಅಲ್ಲದೆ, ದಿನಾಂಕ: 02-04-2012 ರ ನೆನಪೋಲೆಯಲ್ಲಿ ಕೋರಿದರೂ ಸಹ ಪ್ರತಿವಾದಿ ಅಧಿಕಾರಿಯು ವರದಿ ಸಲ್ಲಿಸಿರುವುದಿಲ್ಲ. ಆದ ಕಾರಣ, ದಿ:28-05-2012 ರಂದು ಕಾರಣ ಕೇಳುವ ನೋಟೀಸ ಜಾರಿ ಮಾಡಿ, ಈ ಬಗ್ಗೆ ವಿವರಣೆ ಸಲ್ಲಿಸುವಂತೆ ಸೂಚಿಸಿರುತ್ತದೆ. ಆದರೂ ಸಹ ಈ ಅಧಿಕಾರಿ ವರದಿ ಸಲ್ಲಿಸದೆ ಬೇಜವಾಬ್ದಾರಿತನ ತೋರಿರುವುದರಿಂದ ಸದರಿಯವರ ವಿರುದ್ಧ ಇಲಾಖಾ ವಿಚಾರಣೆಗೆ ಆದೇಶಿಸಲು ಉಪ ಲೋಕಾಯುಕ್ತ-1 ರವರು ಶಿಫಾರಸ್ಸು ಮಾಡಿರುವುದಾಗಿ ಅಪರ ನಿಬಂಧಕರು, ವಿಚಾರಣೆಗಳು-6, ಇವರು ಮೇಲೆ ಓದಲಾದ ದಿ:25-10-2012. ರ ಪತ್ರದಲ್ಲಿ ತಿಳಿಸಿರುತ್ತಾರೆ.

ಕರ್ನಾಟಕ ಉಪ ಲೋಕಾಯುಕ್ತ-1 ರವರ ವರದಿ ಮತ್ತು ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಲಾಗಿ, ಮೇಲ್ಕಂಡ ಅಧಿಕಾರಿ/ನೌಕರರ ವಿರುದ್ಧ ಮಾಡಿರುವ ಆರೋಪಗಳಲ್ಲಿ ಸತ್ಯಾಂಶವಿರುವುದು ಮೇಲ್ನೋಟಕ್ಕೆ ಕಂಡು ಬರುವುದರಿಂದ, ಅವರ ವಿರುದ್ಧ ಇಲಾಖಾ ವಿಚಾರಣೆ ಜರುಗಿಸಲು ಪ್ರಕರಣವನ್ನು ಕನಾಟಕ ಉಪ ಲೋಕಾಯುಕ್ತ-1 ರವರಿಗೆ ವಹಿಸಲು ಸರ್ಕಾರವು ನಿರ್ಧರಿಸಿ, ಈ ಮುಂದಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 217 ವಿಸೇಬಿ 2012, ಬೆಂಗಳೂರು, ದಿನಾಂಕ:15-01-2013**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಶ್ರೀ ಶರಣಬಸವ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಸಿಂಧನೂರು ರಾಯಚೂರು ಜಿಲ್ಲೆ ಇವರ ವಿರುದ್ಧ ಮಾಡಿರುವ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆ ಜರುಗಿಸಲು ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ.) ನಿಯಮಗಳು 1957ರ ನಿಯಮ 14(ಎ) ರ ಪ್ರಕಾರ ಪ್ರಕರಣವನ್ನು ಕರ್ನಾಟಕ ಉಪ ಲೋಕಾಯುಕ್ತ-1 ರವರಿಗೆ ವಹಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ಬಿ. ರಘುನಾಥ್).
ಸರ್ಕಾರದ ಅಧೀನ ಕಾರ್ಯದರ್ಶಿ.
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.

2. ಉಪ ಲೋಕಾಯುಕ್ತರು-1, ಕರ್ನಾಟಕ ಲೋಕಾಯುಕ್ತರ ಕಛೇರಿ, ಬೆಂಗಳೂರು.
3. ಅಪರ ನಿಬಂಧಕರು, ವಿಚಾರಣೆಗಳು-6, ಕರ್ನಾಟಕ ಲೋಕಾಯುಕ್ತರ ಕಛೇರಿ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ, ರಾಯಚೂರು.
5. ಸಂಬಂಧಪಟ್ಟ ನೌಕರರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ, ರಾಯಚೂರು ಇವರ ಮುಖಾಂತರ)
6. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ(ಪಂ.ರಾಜ್) / ಅಪರ ಕಾರ್ಯದರ್ಶಿ (ಆಡಳಿತ), ಗ್ರಾ.ಅ. & ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
7. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ. & ಪಂ.ರಾಜ್ ಇಲಾಖೆ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.